ಅರಣ್ಯ ಭೂಮಿಯಂನ್ನು ಹಸ್ತಾಂತರಿಸುವಾಗ ಅನುಸರಿಸಬೇಕಾದ ಕ್ರಮದ ಬಗ್ಗೆ

೩೧೬. ಶ್ರೀ ಬಿ. ಹೆಚ್. ಬನ್ನಿಕೋಡ (ಹಿರೇಕೆರೂರು).—ಮಾನ್ಯ ಪಶುಸಂಗೋಪನ ಮತ್ತು ಅರಣ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕೇಂದ್ರ ಅರಣ್ಯ ಸಂರಕ್ಷಣಾ ಕಾಯ್ದೆ ಮೇರೆಗೆ ಅರಣ್ಯ ಭೂಮಿಯನ್ನು ಕೇಂದ್ರ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸಲು ಬರುವುದಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಕರ್ನಾಟಕ ಪಲ್ಪ್‌ವುಡ್ ಕಂಪನಿಗೆ ಅರಣ್ಯ ಭೂಮಿಯನ್ನು ಹಸ್ತಾಂತರಿಸುವಾಗ ಕೇಂದ್ರ ಸರ್ಕಾರದ ಅನುಮತಿಯನ್ನು ಪಡೆಯಲಾಗಿದೆಯೇ ?

ಶ್ರೀ ಬಿ. ಬಸವಲಿಂಗಪ್ಪ (ಅರಣ್ಯ ಮತ್ತು ಪಶುಸಂಗೋಪನ ಮಂತ್ರಿಗಳು).—

ಅ) ಗಮನಕ್ಕೆ ಬಂದಿದೆ.

ಆ) ಇಲ್ಲ.

ರಾಜ್ಯದಲ್ಲಿ ದೂರದರ್ಶನದ ೨ನೇ ಚಾನಲ್ ಪ್ರಾರಂಭಿಸುವ ಬಗ್ಗೆ.

೩೩೪. ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ).—ಮಾನ್ಯ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಮತ್ತು ವಾರ್ತಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ದೂರದರ್ಶನದ ಎರಡನೇ ಚಾನಲನ್ನು ಪ್ರಾರಂಭಿಸಲು ರಾಜ್ಯ ಸರ್ಕಾರ ಕೇಂದ್ರ ವಾರ್ತಾ ಮತ್ತು ಪ್ರಸಾರ ಮಂತ್ರಿ ಹಾಗೂ ಶಾಖೆಯ ಮೇಲೆ ತಂದಿರುವ ಒತ್ತಡಗಳೇನು ?

ಆ) ಬೆಂಗಳೂರು ದೂರದರ್ಶನದ ಕಾರ್ಯಕ್ರಮಗಳು ರಾಜ್ಯದಾದ್ಯಂತ ಬಿತ್ತರಗೊಳ್ಳುವಂತೆ ಪ್ರಯತ್ನಿಸಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಮೇಲೆ ಒತ್ತಾಯ ಮಾಡಿದೆಯೇ ?

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಮತ್ತು ವಾರ್ತಾ ಸಚಿವರು).—

ಅ) ನವದೆಹಲಿಯಲ್ಲಿ ದಿನಾಂಕ ೧೮-೪-೧೯೮೦ರಂದು ಜರುಗಿದ ೨೦ನೆಯ ಅಖಿಲಭಾರತ ವಾರ್ತಾ ಸಚಿವರ ಸಮ್ಮೇಳನದಲ್ಲಿ ಈ ವಿಷಯ ಕುರಿತಾಗಿ ಪ್ರಸ್ತಾಪಿಸಲಾಗಿದೆ. ದೂರದರ್ಶನ ಕೇಂದ್ರದ ಎರಡನೆ ತರಂಗವನ್ನು ರಾಜ್ಯದಲ್ಲಿ ಸ್ಥಾಪಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗಿದೆ.

ಆ) ಬೆಂಗಳೂರು ದೂರದರ್ಶನ ಕೇಂದ್ರದೊಂದಿಗೆ ರಾಜ್ಯದ ಎಲ್ಲ ಮರು ಪ್ರಸಾರ ದೂರದರ್ಶನ ಕೇಂದ್ರಗಳನ್ನು ಜೋಡಿಸುವಂತೆ ರಾಜ್ಯ ಸರ್ಕಾರವು ಕೇಂದ್ರವನ್ನು ಒತ್ತಾಯಿಸಿದೆ.

ತೀರ್ಥಹಳ್ಳಿ ಮಂತ್ತು ಹೊಸನಗರ ತಾಲ್ಲೂಕಿನ ಮಂಗನ ಕಾಯಿಲೆ

೧೭೮. ಶ್ರೀ ಬಿ. ಎಸ್. ಯಡಿಯೂರಪ್ಪ (ಶಿಕಾರಿಪುರ).— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ತೀರ್ಥಹಳ್ಳಿ ಮತ್ತು ಹೊಸನಗರ ತಾಲ್ಲೂಕುಗಳಲ್ಲಿ ಮಂಗನಕಾಯಿಲೆಯಿಂದ ಚಿಕಿತ್ಸೆಗೆ ಒಳಗಾದವರ ಸಂಖ್ಯೆ ಎಷ್ಟು ?

ಆ) ಈ ಕಾಯಿಲೆಗೆ ಚಿಕಿತ್ಸೆ ಪಡೆದರೂ ಮೃತಪಟ್ಟವರ ಸಂಖ್ಯೆ ಎಷ್ಟು ?

ಇ) ಈ ಕಾಯಿಲೆಯಿಂದ ಮೃತರಾದ ಕುಟುಂಬದವರಿಗೆ ಮುಖ್ಯಮಂತ್ರಿಯವರ ಪರಿಹಾರ ನಿಧಿಯಿಂದ ಪರಿಹಾರ ನೀಡಲಾಗಿದೆಯೆ ? ಹಾಗಿದ್ದಲ್ಲಿ ಎಷ್ಟು ಜನರಿಗೆ ಪರಿಹಾರ ನೀಡಲಾಗಿದೆ ?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ೧೯೮೦ನೇ ವರ್ಷದಲ್ಲಿ ಜನವರಿ ತಿಂಗಳಿನಿಂದ ಮೇ ೩೧ ರ ವರೆಗೆ ಒಟ್ಟು ೫೨೯ ಜನರಿಗೆ ಮಂಗನ ಕಾಯಿಲೆ ಹರಡಿದೆ.

೧) ತೀರ್ಥಹಳ್ಳಿ ತಾಲ್ಲೂಕು — ೫೦೭
೨) ಹೊಸನಗರ ತಾಲ್ಲೂಕು — ೨೧

ಒಟ್ಟು ೫೨೮